# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊಪ್ಪಳ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ತೆರವಾಗಿದ್ದ ಅಧಿಕಾರಿ ಹುದ್ದೆ ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 1 ಶಾಖೆಯ ಕಡತ ಸಂಖ್ಯೆ: ಆಇ 205 ವೆಚ್ಚ 1/2020 (ಇ)

**ಪ್ರಸ್ತಾವನೆ:**

ಕೊಪ್ಪಳ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ತೆರವಾಗಿದ್ದ ಉಪ ನಿರ್ದೇಶಕರ ಹುದ್ದೆಗೆ ಶ್ರೀ ಶಿವಪ್ಪ ಎಸ್.ಬೆನಕಲ್ ಇವರು ಸ್ಥಾನಪನ್ನ ಬಡ್ತಿ ಹೊಂದಿ ದಿನಾಂಕ:07-02-2020ರಂದು ಕರ್ತವ್ಯಕ್ಕೆ ಹಾಜರಾಗಿದ್ದು, ಪ್ರಸ್ತುತ ವೇತನಕ್ಕಾಗಿ ಲೆಕ್ಕ ಶೀರ್ಷಿಕೆ: 2851-00-107-0-29-ಕೈಮಗ್ಗ ಮತ್ತು ವಸ್ತ್ರಾಲಯಗಳಿಗೆ ವೇತನಾಂಶ-(005-ಜಿಲ್ಲಾ ವಲಯ ವೇತನಗಳು) ಅಡಿ ಕೊರತೆಯಾಗಿರುವ ರೂ.11.19ಲಕ್ಷಗಳನ್ನು 2020-21ನೇ ಸಾಲಿನ ವೇತನ ವೆಚ್ಚಕ್ಕಾಗಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತಿ ಕಾರ್ಯಕ್ರಮದಡಿ ಕೋರಿರುವ ರೂ.7.31ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಮತ್ತು ಫೆಬ್ರವರಿ 2020ನೇ ಮಾಹೆಯ ವೇತನವನ್ನು ಸೆಳೆಯಲು ಹೆಚ್.ಆರ್.ಎಂ.ಎಸ್.ನಲ್ಲಿ ಅನುವು ಮಾಡಿದ ನಂತರ ಹಾಗೂ ಮಾರ್ಚ್ 2020ರ ನಂತರದ ವೇತನವನ್ನು ಪ್ರಸಕ್ತ ಸಾಲಿನಲ್ಲಿ ಸೆಳೆಯಲು ತಿಳಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 267 ವೆಚ್ಚ 6/2020(ಇ) ದಿನಾಂಕ: 12ನೇ ಆಗಸ್ಟ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ11.19ಲಕ್ಷ (ರೂಪಾಯಿ ಹನ್ನೊಂದು ಲಕ್ಷದ ಹತ್ತೊಂಬತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಕ್ರಸಂ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಕೊಪ್ಪಳ | 2851-00-107-0-29-005 | 11.19 |
| | ಒಟ್ಟು | | **11.19** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

1414 820165
12/8/20

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಪ್ಪಳ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಕೊಪ್ಪಳ
7. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ